## ಕರ್ನಾಟಕ ವಿಧಾನ ಪರಿಷತ್ತು

ಸದಸ್ಯರ ಹೆಸರು : ಶ್ರೀ ಕೇಶವ ಪ್ರಸಾದ್ ಎಸ್.
(ವಿಧಾನ ಸಭೆಯಿಂದ ಚುನಾಯಿತರಾದವರು)

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 107 (121)

ಉತ್ತರಿಸುವ ಸಚಿವರು : ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು

ಉತ್ತರಿಸಬೇಕಾದ ದಿನಾಂಕ : 27-01-2026

*****

| ಕ್ರಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ವಿಜಯಪುರ ಜಿಲ್ಲೆಯ ಯುವಕ-ಯುವತಿಯರು ನಿರುದ್ಯೋಗ ಸಮಸ್ಯೆಯಿಂದ ಬೆಂಗಳೂರು, ಮೈಸೂರು, ಹುಬ್ಬಳ್ಳಿ, ಗೋವಾ, ಮಹಾರಾಷ್ಟ್ರ ಮುಂತಾದ ಸ್ಥಳಗಳಿಗೆ ವಲಸೆ ಹೋಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಈ ರೀತಿಯ ಯಾವುದೇ ಪ್ರಕರಣಗಳು ಸರ್ಕಾರಕ್ಕೆ ವರದಿಯಾಗಿರುವುದಿಲ್ಲ. |
| (ಆ) | ವಿಜಯಪುರ ಜಿಲ್ಲೆಯಲ್ಲಿ ಜವಳಿ ಪಾರ್ಕ್ ಅನ್ನು ಸ್ಥಾಪಿಸಿದ್ದಲ್ಲಿ ಹಲವಾರು ಯುವಕ – ಯುವತಿಯರಿಗೆ ಉದ್ಯೋಗಾವಕಾಶ ದೊರಕುವುದು ಸರ್ಕಾರದ ಗಮನದಲ್ಲಿ ಇದೆಯೇ; | ಹೌದು |
| (ಇ) | ಇದ್ದಲ್ಲಿ, ವಿಜಯಪುರ ಜಿಲ್ಲೆಯಲ್ಲಿ ಪಾರ್ಕ್ ಸ್ಥಾಪಿಸುವ ಪ್ರಸ್ತಾವನೆ ಯಾವ ಹಂತದಲ್ಲಿದೆ; (ವಿವರ ನೀಡುವುದು) | ಕಿತ್ತೂರು ವಿಭಾಗದ ವಿಜಯಪುರ ಜಿಲ್ಲೆಯ ಬಸವನ ಬಾಗೇವಾಡಿ ತಾಲ್ಲೂಕಿನಲ್ಲಿ ನಾಗೂರು ಗ್ರಾಮದ ರಿ.ಸ.ನಂ.319 ರಲ್ಲಿ 15 ಎಕರೆ ಗಾಯರಾಣ ಜಮೀನನ್ನು ಗುರುತಿಸಲಾಗಿದೆ. ಕೈಮಗ್ಗ ಮತ್ತು ಜವಳಿ ಇಲಾಖೆಯ ಹೆಸರಿಗೆ ಪಡೆಯಲು ಕಂದಾಯ ಇಲಾಖೆಯ ಪರಿಶೀಲನೆಯಲ್ಲಿರುತ್ತದೆ. |
| (ಈ) | ಯಾವ ಕಾಲಮಿತಿಉಯೊಳಗೆ ವಿಜಯಪುರ ಜಿಲ್ಲೆಯಲ್ಲಿ ಸರ್ಕಾರದಿಂದ ಜವಳಿ ಪಾರ್ಕ್ ಅನ್ನು ಸ್ಥಾಪಿಸಲಾಗುವುದು? | ಕಂದಾಯ ಇಲಾಖೆಯಿಂದ ಜಮೀನನ್ನು ಸಹಾಯಕ ನಿರ್ದೇಶಕರು, ಕೈಮಗ್ಗ ಮತ್ತು ಜವಳಿ ಇಲಾಖೆ, ಜಿಲ್ಲಾ ಪಂಚಾಯತ್, ವಿಜಯಪುರ ಇವರ ಹೆಸರಿಗೆ ಜಮೀನನ್ನು ಮಂಜೂರಿಸಿದ ನಂತರ ಯೋಜನಾ ಮಾರ್ಗಸೂಚಿಯನ್ವಯ ಸಾರ್ವಜನಿಕ-ಖಾಸಗಿ ಸಹಭಾಗಿತ್ವ (ಪಿಪಿಪಿ) ಮಾದರಿಯಲ್ಲಿ ನೂತನ ಜವಳಿ ಹಾಗೂ ಸಿದ್ಧ ಉಡುಪು ನೀತಿಯಡಿ ಜವಳಿ ಪಾರ್ಕ್ ಸ್ಥಾಪಿಸಲು ಕ್ರಮ ಜರುಗಿಸಲಾಗುವುದು. |

ಸಂಖ್ಯೆ: CI 17 JAKE 2026

(ಶಿವಾನಂದ ಎಸ್. ಪಾಟೀಲ)
ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು